# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 16-04-2018**

**ಪ್ರಕಟಣೆಯ ಕೃಪೆಗಾಗಿ.............**

ವಿಜಯಪುರ: ದಲಿತರು ತಮ್ಮ ಸಾಂಸ್ಕೃತಿಕ ಗುರುತನ್ನು ತೋರಿಸಿಕೊಡಲು ಘನತೆಯ ದಾರಿಯನ್ನು ಮತ್ತು ಹೋರಾಟವನ್ನು ಬಳಸಿಕೊಂಡು ಸಾಮಾಜಿಕ ಗೌರವ ಪಡೆದುಕೊಳ್ಳಬೇಕು ಎಂದು ಮೈಸೂರಿನ ಡಾ.ಆರ್. ಚಲಪತಿ ಅಭಿಪ್ರಾಯಪಟ್ಟರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 127ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಬೋಧಿ ವೃಕ್ಷಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಹೋರಾಟದ ಹಾದಿಯಲ್ಲಿ ದಲಿತ ಸಮುದಾಯ ಎದುರಿಸುತ್ತಿರುವ ಸಾಮಾಜಿಕ, ಮಾನಸಿಕ ಮತ್ತು ಆರ್ಥಿಕ ಸಮಸ್ಯೆಗಳ ಕುರಿತು ಮಾತನಾಡಬೇಕಿದೆ. ಆಧುನಿಕ ದಿನಮಾನಗಳಲ್ಲಿಯೂ ದಲಿತರಿಗೆ ರಾಜಕೀಯವಾಗಿ ಸ್ಪಷ್ಟ ನಿರ್ಧಾರ ತೆಗೆದುಕೊಳ್ಳುವ ಅಧಿಕಾರವಿಲ್ಲ ಎಂದು ಅವರು ವಿಷಾದಿಸಿದರು.

ಮೇಲ್ಜಾತಿ ಅವರಿಗೆ ಇರದ ಗುರುತಿನ ಬಿಕ್ಕಟ್ಟು, ದಲಿತರಿಗಷ್ಟೇ ಯಾಕೆ ಬೇಕು ಎಂದು ಪ್ರಶ್ನಿಸಿದ ಅವರು ದಲಿತರ ಗುರುತುಗಳನ್ನು ಘನತೆವೆತ್ತ ರೂಪದಲ್ಲಿ ಬಳಸಿಕೊಳ್ಳಲು ಓದು, ಉದ್ಯೋಗ ಬೇಕು ಎಂದು ಹೇಳಿದವರು ಅಂಬೇಡ್ಕರ್ ಎಂದು ಡಾ.ಚಲಪತಿ ತಿಳಿಸಿದರು.

ದಲಿತರು ಎಲ್ಲಿದ್ದರೂ ಶೋಷಣೆಗೆ, ಅವಮಾನಕ್ಕೆ ಒಳಗಾಗುತ್ತಿದ್ದಾರೆ. ಅವುಗಳನ್ನು ಎದುರಿಸಲು ಅನೇಕ ಕಾನೂನುಗಳು ಇದ್ದರೂ ಸಹ ಅವುಗಳನ್ನು ಬಳಸುವ ಬಗೆಯಲ್ಲಿ ದಲಿತರು ಸೋತಿದ್ದಾರೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಮಾತನಾಡಿ, 'ವಿಶ್ವ ಕಂಡ ಮಹಾನ್ ಚೇತನ ಡಾ.ಬಿ.ಆರ್. ಅಂಬೇಡ್ಕರ್. ದೇಶದ ಸಾಮಾನ್ಯ ಜನರು ಯಾವ ಮಾರ್ಗದಲ್ಲಿ ಹೆಜ್ಜೆ ಇಡಬೇಕು ಎಂದು ಮಾರ್ಗದರ್ಶನ ತೋರಿಸಿದರು.

ಕೇವಲ ದಲಿತರ ಸಮಸ್ಯೆಗಳನ್ನ ಮಾತ್ರ ಎತ್ತಿ ಹಿಡಿಯದೇ, ಮಹಿಳೆಯರ ಸಮಸ್ಯೆಗಳ ಬಗ್ಗೆಯೂ ಚರ್ಚಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು, ಬೋಧಕ-ಭೋಧಕೇತರ ಸಿಬ್ಬಂದಿ ಹಾಗೂ ಮತ್ತಿತರರು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಡಾ.ಸಂಜು ಯಲಬಳ್ಳಿ ಅಂಬೇಡ್ಕರ್ ಕುರಿತಾದ ಗೀತೆಯನ್ನು ಹಾಡಿದರು. ಡಾ.ಸುಜಾತಾ ಚಲವಾದಿ ಬುದ್ಧ ವಂದನೆ ಮಾಡಿ, ಅತಿಥಿಗಳನ್ನು ಪರಿಚಯಿಸಿದರು. ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ನಿರ್ದೇಶಕ ಪ್ರೊ. ಪಿ.ಕಣ್ಣನ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸುನೀತಾ ಜಾದವ ವಂದಿಸಿದರು. ದೈಹಿಕ ಶಿಕ್ಷಣ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹನುಮಂತಯ್ಯ ಪೂಜಾರಿ ನಿರೂಪಿಸಿದರು.

**ಫೋಟೋ ಕ್ಯಾಪ್ಷನ್:**

1) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 127ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಮೈಸೂರಿನ ಡಾ.ಆರ್. ಚಲಪತಿ ಬೋಧಿ ವೃಕ್ಷಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

2) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 127ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಮೈಸೂರಿನ ಡಾ.ಆರ್. ಚಲಪತಿ ಬೋಧಿ ವೃಕ್ಷಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

3) ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್. ಅಂಬೇಡ್ಕರ್ ಅವರ 127ನೇ ಜನ್ಮದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಸಚಿವ ಪ್ರೊ.ಎಲ್.ಆರ್. ನಾಯಕ ಮಾತನಾಡಿದರು.


Educate!
Organise!
Dr. B.R. Ambedkar Studies Centre
Dr. B.R. Ambedkar's 127th Birthday
President : Prof. L.R. Naik
Registrar, Akkamahadevi Women's University Vijayapura
Chief Guest : Dr. R. Chalapathy
Mysuru
CONVENOR
Prof. P. Kannan
Date : 14-04-2018 Time : 11.00 am


Educate!
Organise!
AKKAMAHADEVI WOMEN'S UNIVERSITY, VIJAYAPURA
127th Birthday
Chief Guest : Dr. R. Chalapathy